ಕರ್ನಾಟಕಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-ADMI0EST(10)/36/2024

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 13-05-2025

## ಪರಿಚಲನಾದೇಶ

ವಿಷಯ: ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಿಗೆ 6ನೇ ಎಐಸಿಟಿಇ ವೇತನಶ್ರೇಣಿಯಡಿ ವೃತ್ತಿಪದೋನ್ನತಿ ನೀಡಿ ರೂ.8000 ರಿಂದ 9000 ಎಜಿಪಿ ನೀಡಿ ಸಹಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 346 ಡಿಟಿಇ 2024 ದಿನಾಂಕ:28-04-2025

******

ಉಲ್ಲೇಖದ ಆದೇಶದಲ್ಲಿ ಹೆಸರಿಸಲಾದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರಿಗೆ 6ನೇ ವೇತನಶ್ರೇಣಿ ರೂ. 15600-39100 + ಎ ಜಿ ಪಿ 8000 ಸಹಾಯಕ ಪ್ರಾಧ್ಯಾಪಕರು ಹಂತ - 3 ರಿಂದ ವೇತನಶ್ರೇಣಿ ರೂ. 37400-67000 + ಎ ಜಿ ಪಿ 9000 ಸಹಪ್ರಾಧ್ಯಾಪಕರು ಹಂತ - 4 ಕ್ಕೆ ಪದೋನ್ನತಿ ನೀಡಿರುವ ಸರ್ಕಾರದ ಆದೇಶವನ್ನು ಸಂಬಂಧಪಟ್ಟ ಅಧ್ಯಾಪಕರಿಗೆ ಹಾಗೂ ಸಂಬಂಧಪಟ್ಟ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

Digitally signed by
Prasanna H
Date: 13-05-2025 19:31:[illegible]

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ,

ಇವರಿಗೆ:-

1. ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ;
2. ಸಂಬಂಧಪಟ್ಟ ಅಧ್ಯಾಪಕರುಗಳು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ (ಪ್ರಾಂಶುಪಾಲರ ಮುಖಾಂತರ)
3. ನೋಡಲ್ ಅಧಿಕಾರಿ, ಇ-ಆಡಳಿತ, ಆಯುಕ್ತರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು (ವೆಬ್‌ಸೈಟ್‌ನಲ್ಲಿ ಅಳವಡಿಸಲು)

ಪ್ರತಿ:-

1. ಮಹಾಲೇಖಪಾಲರು, ಎ&ಇ, (AAO,GE-XI) ಬೆಂಗಳೂರು;
2. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ), ಬಹುಮಹಡಿ ಕಟ್ಟಡ, ಬೆಂಗಳೂರು;
3. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಆಪ್ತ ಶಾಖೆ, ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
5. ಹೆಚ್ಚುವರಿ ಪ್ರತಿ ಕಡತಕ್ಕೆ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ, ಸಹಾಯಕ ಪ್ರಾಧ್ಯಾಪಕರಿಗೆ ಎಐಸಿಟಿಇ 6ನೇ ವೇತನ ಶ್ರೇಣಿಯಡಿ ವೃತ್ತಿ ಪದೋನ್ನತಿ ನೀಡಿ ರೂ. 8000 ರಿಂದ ರೂ. 9000 ಎ.ಜಿ.ಪಿ.ರಲ್ಲಿ ಸಹ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ: ಇಡಿ 96 ಡಿಟಿಇ 2010, ದಿನಾಂಕ: 31.03.2011.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 20 ಡಿಟಿಇ 2018, ದಿನಾಂಕ: 08.12.2020.
3. ಸರ್ಕಾರದ ಪತ್ರ ಸಂಖ್ಯೆ: ಇಡಿ 186 ಡಿಟಿಇ 2020, ದಿನಾಂಕ:30.09.2021.
4. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಏಕ ಕಡತ ಸಂಖ್ಯೆ: DTE-ADMI0EST(10)/36/2024.
5. ಸರ್ಕಾರದ ಆದೇಶ ಸಂಖ್ಯೆ : ಇಡಿ 346 ಟಿಇಸಿ 2024, ದಿನಾಂಕ: 28.01.2025.

ತಾಂತ್ರಿಕ ಶಿಕ್ಷಣ ಇಲಾಖೆ
ನಿರ್ದೇಶಕರ ಆಪ್ತ ಶಾಖೆ
ಸಂಖ್ಯೆ: 001
ದಿನಾಂಕ: 03/05/25

EST-10

**ಪ್ರಸ್ತಾವನೆ:-**

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ಸರ್ಕಾರದ ಆದೇಶದ ಆದೇಶದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ 6ನೇ ಎಐಸಿಟಿಇ ವೇತನವನ್ನು ದಿನಾಂಕ: 01.01.2006 ರಿಂದ ಅನ್ವಯಿಸುವಂತೆ ವಿಸ್ತರಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆ ಆಧಾರಿತ ವೃತ್ತಿ ಪದೋನ್ನತಿ (CAS) ಸೌಲಭ್ಯಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. All India Council for Technical Education (Career Advancement scheme for the teachers and other Academic staff in Technical Institutions) (Degree) Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಿ ಕೆಲವು ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ವೃತ್ತಿ ಪದೋನ್ನತಿ (CAS) ಸೌಲಭ್ಯವನ್ನು ಮಂಜೂರು ಮಾಡಲು ಆದೇಶಿಸಲಾಗಿದೆ.

...2

ಮೇಲೆ ಕ್ರಮಾಂಕ (3)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಮಂಜೂರು ಮಾಡುವ ಪ್ರಸ್ತಾವನೆಗಳನ್ನು ಪರಿಶೀಲಿಸಲು ಪ್ರತ್ಯೇಕ ಸ್ಥಾನೀಕರಣ ಸಮಿತಿಯನ್ನು ರಚಿಸುವ ಅಧಿಕಾರವನ್ನು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಕ್ರಮಾಂಕ (4)ರಲ್ಲಿ ಓದಲಾದ ಆಯುಕ್ತರ ಏಕ ಕಡತ ಪ್ರಸ್ತಾವನೆಯಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ವಿಷಯ ತಜ್ಞರುಗಳನ್ನೊಳಗೊಂಡ ಸ್ಥಾನೀಕರಣ ಸಮಿತಿಯು ದಿನಾಂಕ:07.03.2024 ರಿಂದ 14.03.2024ರವರೆಗೆ ಸಭೆ ಸೇರಿ ಸರ್ಕಾರಿ ಇಂಜಿನಿಯರಿಂಗ್ ಗಣಕಯಂತ್ರ ಇಂಜಿನಿಯರಿಂಗ್ ವಿಭಾಗದ 04 ಸಹಾಯಕ ಪ್ರಾಧ್ಯಾಪಕರು, ಮತ್ತು ಸಿವಿಲ್ ವಿಭಾಗದ 01 ಸಹಾಯಕ ಪ್ರಾಧ್ಯಾಪಕರುಗಳನ್ನೊಳಗೊಂಡಂತೆ ಒಟ್ಟು 05 ಸಹಾಯಕ ಪ್ರಾಧ್ಯಾಪಕರುಗಳು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯಡಿ ಸಹ ಪ್ರಾಧ್ಯಾಪಕರ ಹುದ್ದೆಗೆ ಸ್ಥಾನೀಕರಣ ಮುಂಬಡ್ತಿ ಮತ್ತು ಎ.ಜಿ.ಪಿ. ಸೌಲಭ್ಯಕ್ಕೆ ನಿಯಮಾನುಸಾರ ಅರ್ಹತೆ ಹೊಂದಿರುವ ಬಗ್ಗೆ ಪರಿಶೀಲಿಸಿ, ಸದರಿಯವರಿಗೆ ವೃತ್ತಿ ಪದೋನ್ನತಿಯನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿರುತ್ತದೆ.

ಅದರಂತೆ, ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 3 ಸಹಾಯಕ ಪ್ರಾಧ್ಯಾಪಕರುಗಳಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ (CAS) ಅಡಿ 6ನೇ ಎಐಸಿಟಿಇ ವೇತನ ಶ್ರೇಣಿ ರೂ.15,600 - 39100 + ಎಜಿಪಿ ರೂ.8000 (ಹಂತ-3) ರಿಂದ ವೇತನ ಶ್ರೇಣಿ 37400-67000 + ಎಜಿಪಿ ರೂ.9000 (ಹಂತ-4) ರಲ್ಲಿ ಸಹ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡಿ ಆದೇಶ ಹೊರಡಿಸಲಾಗಿದೆ.

ಇನ್ನುಳಿದ ಇಬ್ಬರು ಸಹಾಯಕ ಪ್ರಾಧ್ಯಾಪಕರುಗಳಾದ ಶ್ರೀಮತಿ ಶಬೀನ್ ತಾಜ್ ಜಿ.ಎ, ಹಾಗೂ ಶ್ರೀ ರಘು.ಎಂ.ಇ ಇವರುಗಳು ನೇಮಕಾತಿ ಷರತ್ತಿನಂತೆ 7 ವರ್ಷದೊಳಗೆ ಪಿಎಚ್.ಡಿ ಪದವಿ ಪೂರ್ಣಗೊಳಿಸಿರುವುದಿಲ್ಲ. 7 ವರ್ಷದ ನಂತರ ಈ ಪದವಿಯನ್ನು ಪೂರ್ಣಗೊಳಿಸಿರುತ್ತಾರೆ. ಹೀಗಾಗಿ ಇವರುಗಳ ಪ್ರಸ್ತಾವನೆಯನ್ನು ಮರು ಪರಿಶೀಲಿಸಲಾಗಿರುತ್ತದೆ. ಈ ರೀತಿಯ ಮತ್ತೊಂದು ಪ್ರಸ್ತಾವನೆಯಲ್ಲಿ 07 ವರ್ಷದೊಳಗೆ ಪಿಎಚ್.ಡಿ ಪದವಿಯನ್ನು ಪೂರ್ಣಗೊಳಿಸದ ಅಭ್ಯರ್ಥಿಗಳಿಗೆ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 5296/2018, ದಿನಾಂಕ: 30.05.2022 ರಲ್ಲಿ ನೀಡಿರುವ ಆದೇಶವನ್ನು ಪರಿಶೀಲಿಸುವ ಷರತ್ತಿಗೊಳಪಟ್ಟು ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 4458/2024 ರಲ್ಲಿನ ಅಂತಿಮ ಆದೇಶಕ್ಕೆ ಒಳಪಟ್ಟು ವೃತ್ತಿ ಪದೋನ್ನತಿ ಸೌಲಭ್ಯ ಮಂಜೂರು ಮಾಡಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಶಬೀನ್ ತಾಜ್ ಜಿ.ಎ, ಹಾಗೂ ಶ್ರೀ ರಘು.ಎಂ.ಇ, ಇವರುಗಳಿಗೆ ಅರ್ಜಿ ಸಂಖ್ಯೆ: 5296/2018, ದಿನಾಂಕ: 30.05.2022 ರಲ್ಲಿ ನೀಡಿರುವ ಆದೇಶವನ್ನು ಪರಿಶೀಲಿಸುವ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 4458/2024ರ ಪ್ರಕರಣದಲ್ಲಿನ ಅಂತಿಮ ಆದೇಶಕ್ಕೆ ಬದ್ಧರಾಗಿರುವ

...3

ಷರತ್ತಿಗೊಳಪಟ್ಟು 6ನೇ ಎಐಸಿಟಿಇ ವೇತನ ಶ್ರೇಣಿ ರೂ.15,600 - 39100 + ಎಜಿಪಿ ರೂ.8000 (ಹಂತ-3) ರಿಂದ ವೇತನ ಶ್ರೇಣಿ 37400-67000 + ಎಜಿಪಿ ರೂ.9000 (ಹಂತ-4) ರಲ್ಲಿ ಸಹ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ನೀಡಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 346 ಟಿಇಸಿ 2024**
**ಬೆಂಗಳೂರು, ದಿನಾಂಕ: 28ನೇ ಏಪ್ರಿಲ್ 2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಪ್ರಾಧ್ಯಾಪಕರುಗಳಾದ ಶ್ರೀಮತಿ ಶಬೀನ್ ತಾಜ್ ಜಿ.ಎ, ಹಾಗೂ ಶ್ರೀ ರಘು.ಎಂ.ಇ, ಇವರುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆ (CAS) ಅಡಿ 6ನೇ ಎಐಸಿಟಿಇ ವೇತನ ಶ್ರೇಣಿ ರೂ.15,600 - 39100 + ಎಜಿಪಿ ರೂ.8000 (ಹಂತ-3) ರಿಂದ ವೇತನ ಶ್ರೇಣಿ 37400-67000 + ಎಜಿಪಿ ರೂ.9000 (ಹಂತ-4) ರಲ್ಲಿ ಸಹ ಪ್ರಾಧ್ಯಾಪಕರ ಹುದ್ದೆಗೆ ವೃತ್ತಿ ಪದೋನ್ನತಿ ಮಂಜೂರು ಮಾಡಿ ಆದೇಶಿಸಿದೆ.

| ಕ್ರ. ಸಂ | ಹೆಸರು, ಪದನಾಮ ಮತ್ತು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆ | ಸೇವೆಗೆ ಸೇರಿದ ದಿನಾಂಕ | ಮುಂಬಡ್ತಿಗೆ ಅರ್ಹತೆ ಪಡೆದ ದಿನಾಂಕ |
|---|---|---|---|
| | **ಗಣಕಯಂತ್ರ ವಿಭಾಗ** | | |
| 1. | **ಡಾ. ಶಬೀನ್ ತಾಜ್ ಜಿ.ಎ.**<br>ಸಹಾಯಕ ಪ್ರಾಧ್ಯಾಪಕರು<br>ಗಣಕಯಂತ್ರ ವಿಭಾಗ<br>ಸರ್ಕಾರಿ ಇಂಜಿನಿಯರಿಂಗ್ ಕಾಲೇಜು<br>ರಾಮನಗರ | 08.12.2010 | 23.01.2019 |
| 2. | **ಡಾ. ರಘು ಎಂ.ಇ.**<br>ಸಹಾಯಕ ಪ್ರಾಧ್ಯಾಪಕರು<br>ಗಣಕಯಂತ್ರ ವಿಭಾಗ<br>ಸರ್ಕಾರಿ ಇಂಜಿನಿಯರಿಂಗ್ ಕಾಲೇಜು<br>ಮೊಸಳೆ ಹೊಸಳ್ಳಿ | 06.10.2010 | 16.02.2019 |

**ಷರತ್ತುಗಳು**:

i. 2010 ಮತ್ತು 2012ರ ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಎ.ಪಿ.ಐ ಅಂಕಗಳ ಆಧಾರಿತ ಎ.ಜಿ.ಪಿ ಮಂಜೂರಾತಿಯು ಸರ್ಕಾರದ ಮಾರ್ಗಸೂಚಿ/ ಆದೇಶಗಳಲ್ಲಿನ ನಿಬಂಧನೆಗೊಳಪಟ್ಟಿರುತ್ತದೆ.

ii. ಎ.ಜಿ.ಪಿ ಮಂಜೂರಾತಿಯು ಎಐಸಿಟಿಇ/ಯುಜಿಸಿ/ಸರ್ಕಾರ/ಇಲಾಖೆ ಕಾಲಕಾಲಕ್ಕೆ ಹೊರಡಿಸುವ ಆದೇಶ/ಸುತ್ತೋಲೆ/ಪತ್ರಗಳಲ್ಲಿ ನಿಗದಿಪಡಿಸುವ ಷರತ್ತು/ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

...4

iii. ಸದರಿಯವರು ಸಿಎಎಸ್‌ರಡಿ ಪದೋನ್ನತಿಗೆ ಅರ್ಹತೆ ಹೊಂದಿದ ದಿನಾಂಕದಿಂದ ಸೇವಾ ಜೇಷ್ಠತೆಯನ್ನು ಪರಿಗಣಿಸುವುದು ಹಾಗೂ ಸದರಿ ಪದೋನ್ನತಿಯ **ಆರ್ಥಿಕ ಸೌಲಭ್ಯವನ್ನು ಭವಿಷ್ಯವರ್ತಿಯಾಗಿ ಅಂದರೆ, ಈ ಆದೇಶವನ್ನು ಹೊರಡಿಸಿದ ದಿನಾಂಕದಿಂದ** ಅನ್ವಯವಾಗುವಂತೆ ಜಾರಿಗೊಳಿಸುವುದು.

iv. ಅರ್ಹ ಅಧ್ಯಾಪಕರುಗಳು ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಯಾವುದೇ ತಪ್ಪು ಮಾಹಿತಿಗಳನ್ನು ಒದಗಿಸಿರುವುದು ಕಂಡು ಬಂದಲ್ಲಿ ಸಂಬಂಧಿಸಿದ ಸಹ ಪ್ರಾಧ್ಯಾಪಕರ ಎ.ಜಿ.ಪಿ ಮಂಜೂರಾತಿಯನ್ನು ಯಾವುದೇ ಮುನ್ಸೂಚನೆ ನೀಡದೇ ಹಿಂಪಡೆಯಲಾಗುವುದು ಹಾಗೂ ತಪ್ಪು ಮಾಹಿತಿ ಒದಗಿಸಿದ ಅಧ್ಯಾಪಕರ ವಿರುದ್ಧ ಕ್ರಮ ಜರುಗಿಸಲಾಗುವುದು.

v. ಸರ್ಕಾರದ ಆದೇಶ ಸಂಖ್ಯೆ: ಇಡಿ 20 ಡಿಟಿಇ 2018, ದಿ: 08.12.2020ರ ಪತ್ರದಲ್ಲಿ ಸೂಚಿಸಿದಂತೆ ಎಪಿಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ 07.11.2015 ರ ವರೆಗೆ ವಿನಾಯಿತಿ ನೀಡಲಾಗಿದೆ.

vi. ಸದರಿ ಬೋಧಕ ಸಿಬ್ಬಂದಿಗಳು ಸಿಎಎಸ್ ಮುಂಬಡ್ತಿಗೆ ಎಲ್ಲಾ ರೀತಿಯಲ್ಲೂ ಅರ್ಹತೆಯನ್ನು ಹೊಂದಿರುವ ಬಗ್ಗೆ ಸ್ಥಾನೀಕರಣ ಆಯ್ಕೆ ಸಮಿತಿಯು ಮಾಡಿರುವ ಶಿಫಾರಸ್ಸಿನಂತೆ ಪರಿಗಣಿಸಲಾಗಿದೆ.

vii. ಈ ಆದೇಶದನ್ವಯ ಮಂಜೂರು ಮಾಡಲಾದ ಎ.ಜಿ.ಪಿ.ಯು ಸ್ಥಳೀಯ/ಮಹಾಲೇಖಪಾಲರ ಲೆಕ್ಕಪರಿಶೋಧನೆಗೆ ಒಳಪಡಿಸಿದಾಗ, ಯಾವುದೇ ಅಸಂಗತಗಳು ಕಂಡು ಬಂದಲ್ಲಿ ಮರು ಪರಿಶೀಲಿಸುವ ಮತ್ತು ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

viii. ಸಹ ಪ್ರಾಧ್ಯಾಪಕರುಗಳ ಎ.ಜಿ.ಪಿ ಮಂಜೂರಾತಿಯ ವಿವರಗಳನ್ನು ಸಂಬಂಧಪಟ್ಟ ನೌಕರರ ಸೇವಾ ಪುಸ್ತಕದಲ್ಲಿ ನಮೂದಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

ix. ಈ ವೃತ್ತಿ ಪದೋನ್ನತಿಯನ್ನು ಸೇವಾ ಜೇಷ್ಟತೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ.

x. ಸದರಿಯವರ ವೇತನ ಶ್ರೇಣಿಯನ್ನು 7ನೇ AICTE ಪರಿಷ್ಕೃತ ವೇತನ ಶ್ರೇಣಿಯಡಿ ಸಂವಾದಿಯಾಗಿ ನಿಗದಿಪಡಿಸಲು ನಿಯಮಾನುಸಾರ ಅಗತ್ಯ ಕ್ರಮವಹಿಸುವುದು.

xi. ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ : 4458/2024ರ ಪ್ರಕರಣದಲ್ಲಿನ ಅಂತಿಮ ಆದೇಶಕ್ಕೆ ಬದ್ಧರಾಗುವ ಷರತ್ತಿಗೊಳ್ಳಪಟ್ಟಿರುತ್ತದೆ.

xii. ಮಾನ್ಯ ನ್ಯಾಯಮಂಡಳಿಯು ಅರ್ಜಿ ಸಂಖ್ಯೆ: 5296/2018 ರಲ್ಲಿನ ಆದೇಶ ಭಾಗದ ಕಂಡಿಕೆ-10 ಮತ್ತು 11 ರಲ್ಲಿ ನೀಡಿರುವ ನಿರ್ದೇಶನವನ್ನು ಪರಿಶೀಲಿಸುವ ಷರತ್ತಿಗೆ ಒಳಪಟ್ಟಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: FD 51 Exp-8/2023, ದಿನಾಂಕ:03.03.2023 ರಲ್ಲಿ ನೀಡಿರುವ ಅಭಿಪ್ರಾಯದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎನ್. ಕುಮಾರ್ 28/04/2025

**(ಎನ್.ಕುಮಾರ್)**
ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ತಾಂತ್ರಿಕ ಶಿಕ್ಷಣ ಮತ್ತು ಯೋಜನೆ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಎ&ಇ), ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.

3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಸಂಬಂಧಪಟ್ಟ ಸಹ ಪ್ರಾಧ್ಯಾಪಕರುಗಳಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಮೂಲಕ)

**ಪ್ರತಿ:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.